# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: - ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಾಮರಾಜನಗರ ಇವರಿಗೆ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ– ಆದೇಶ

**ಓದಲಾಗಿದೆ:-** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಚಾಮರಾಜನಗರ ಇವರ ಪತ್ರ ಸಂಖ್ಯೆ:ಜಿಪಂಚಾ:ಆಡಳಿತ(2):33:2020-21/426, ದಿನಾಂಕ: 05.08.2021

****

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಚಾಮರಾಜನಗರ ಇವರು ಮೇಲೆ ಓದಲಾದ ಪತ್ರದಲ್ಲಿ, ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಾಮರಾಜನಗರ ಇವರ ಕಾರ್ಯವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿಗಳ ಪರಿಶೀಲನೆಯನ್ನು ಮಾಡಲು ಸರ್ಕಾರಿ ವಾಹನದ ಅಗತ್ಯವಿರುತ್ತದೆ. ಸದರಿ ಕಚೇರಿಯಲ್ಲಿ ಈ ಹಿಂದೆ ಉಪಯೋಗಿಸುತ್ತಿದ್ದ ಇಲಾಖಾ ವಾಹನ ಸಂಖ್ಯೆ: ಕೆಎ 10 ಜಿ 1111 ವಾಹನವನ್ನು ಉಪಯೋಗಿಸಲು ಅರ್ಹವಾಗಿರುವುದಿಲ್ಲವೆಂದು ಹಿರಿಯ ಮೋಟಾರು ವಾಹನ ನಿರೀಕ್ಷಕರು ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಚಾಮರಾಜನಗರ ಇವರು ಪರಿಶೀಲನಾ ವರದಿ ಸಲ್ಲಿಸಿರುತ್ತಾರೆ. 2021–22ನೇ ಸಾಲಿನಲ್ಲಿ ಲೆಕ್ಕಶೀರ್ಷಿಕೆ: 2702-00-101-0-28-200 ರಡಿ "ಹೊಸ ಸರಬರಾಜು ಯೋಜನೆ" ಲೆಕ್ಕಶೀರ್ಷಿಕೆಯಡಿ ಹೊಸ ವಾಹನವನ್ನು ಖರೀದಿಸಲು ಅನುದಾನವನ್ನು ಬಿಡುಗಡೆ ಮಾಡಿರುವುದರಿಂದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಾಮರಾಜನಗರ ಕಛೇರಿಗೆ ಒಂದು ಹೊಸ ವಾಹನ ಖರೀದಿಸಲು ಅನುಮತಿ ನೀಡುವಂತೆ ಕೋರಿರುತ್ತಾರೆ

ಸರ್ಕಾರವು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಾಮರಾಜನಗರ ಇವರ ಪಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 49 ಜಡ್‌ಪಿಎ 2022(ಇ).

## ಬೆಂಗಳೂರು, ದಿನಾಂಕ:19.03.2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಾಮರಾಜನಗರ ಇವರ ಕಚೇರಿ ಉಪಯೋಗಕ್ಕಾಗಿ, ಸಿ.ಆ.ಸು. ಇಲಾಖೆಯ ಆದೇಶಗಳನ್ವಯ ರೂ. 6.50 ಲಕ್ಷ ಆರ್ಥಿಕ ಮಿತಿಯೊಳಗೆ (Ex-Showroom Rate) 01 ಹೊಸ ವಾಹನವನ್ನು ಖರೀದಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಖರೀದಿಸಲು ಅನುಮತಿ ನೀಡಿದೆ.

1. 2021-22 ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾದ ಅನುದಾನದಲ್ಲಿ ಜಿಲ್ಲಾ ಪಂಚಾಯತ್ /ತಾಲ್ಲೂಕು ಪಂಚಾಯತ್ ನಿಧಿಯಂದ ವೆಚ್ಚ ಭರಿಸುವುದು.ಪ್ರಸುತ್ತ ಬಳಸುತ್ತಿರುವ ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿ ಮಾಡಿ ಅದರಿಂದ ಬರುವ ಹಣವನ್ನು ಸಂಬಂಧಿಸಿದ ಲೆಕ್ಕ ಶಿರ್ಷಿಕೆ ಜಮಾ ಮಾಡುವುದು.
2. ಸದರಿ ವಾಹನವನ್ನು ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ, ಪಾರದರ್ಶಕ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.
3. ಹೊಸ ವಾಹನ ಖರೀದಿಸುವ ಸಂದರ್ಭದಲ್ಲಿ ಇಂಧನ ಮಿತವ್ಯಯ ಹಾಗೂ ನಿರ್ವಹಣಾ ವೆಚ್ಚ ಕಡಿಮೆ ಹೊಂದಿರುವ ವಾಹನಗಳನ್ನು ಖರೀದಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 180 ವೆಚ್ಚ-6/2022 ದಿನಾಂಕ:15.03.2022 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

19/3

**(ಕೆ.ನದೀಮ್ ಅಹ್ಮದ್)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

19/03/2022

**ಇವರಿಗೆ:**

1. ಮಹಾಲೇಖಪಾಲರು, (ಎ&ಇ), ಕರ್ನಾಟಕ, (ಲೆಕ್ಕಪತ್ರ 1 & 2/ಆಡಿಟ್) ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಾಮರಾಜನಗರ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ಜಿಲ್ಲಾ ಪಂಚಾಯತ್), ವಿಧಾನಸೌಧ ಬೆಂಗಳೂರು.
6. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚಾಮರಾಜನಗರ.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಜಂಟಿ ಕಾರ್ಯದರ್ಶಿಗಳು(ಆಡಳಿತ-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಶಾಖೆ
3. ಶಾಖಾ ರಕ್ಷಾ ಕಡತ / ವೆಬ್ ಸೈಟ್ ನಲ್ಲಿ ಪ್ರಕಟಿಸಲು
4. ಶಾಖಾ ರಕ್ಷಾಕಡತ.